ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

**KARNATAKA LEGISLATIVE ASSEMBLY, RESEARCH AND REFERENCE BRANCH**

ಪತ್ರಿಕಾ ತುಣುಕುಗಳು

**PAPER CLIPPINGS**

ಇಲಾಖೆ / ವಿಷಯ : DEPARTMENT / SUBJECT:

ಪತ್ರಿಕೆಯ ಹೆಸರು : NAME OF THE NEWS PAPER: ಪ್ರಜಾವಾಣಿ          ದಿನಾಂಕ : DATE: 20/3/21

## ಮಾಜಿ ಶಾಸಕ ವಾಲ್ಮೀಕ್ ನಾಯಕ



ವಾಡಿ (ಕಲಬುರ್ಗಿ ಜಿಲ್ಲೆ): ಚಿತ್ತಾಪುರ ಕ್ಷೇತ್ರದ ಮಾಜಿ ಶಾಸಕ ವಾಲ್ಮೀಕ್ ನಾಯಕ (75) ಹೃದಯಾಘಾತದಿಂದ ಶುಕ್ರವಾರ ಬೆಳಿಗ್ಗೆ ನಿಧನರಾದರು. ಅವರಿಗೆ ಪತ್ನಿ, ಇಬ್ಬರು ಪುತ್ರರು ಮತ್ತು ನಾಲ್ವರು ಪುತ್ರಿಯರು ಇದ್ದಾರೆ.

ವಾಲ್ಮೀಕ್ ನಾಯಕ ಅವರು ಬೆಂಗಳೂರಿನಿಂದ ರೈಲಿನಲ್ಲಿ ಹಿಂದಿರುಗುತ್ತಿದ್ದ ವೇಳೆ ಎದೆನೋವು ಕಾಣಿಸಿಕೊಂಡ ಕಾರಣ ಕಲಬುರ್ಗಿಯ ಜಿಮ್ಸ್‌ಗೆ ಕರೆದೊಯ್ಯಲಾಗಿತ್ತು.

ಬಿಜೆಪಿಯಿಂದ ಶಹಾಬಾದ್ ಕ್ಷೇತ್ರದಿಂದ ಒಮ್ಮೆ ಚಿತ್ತಾಪುರದಿಂದ ನಾಲ್ಕು ಬಾರಿ ಸ್ಪರ್ಧಿಸಿದ್ದರು. 2009ರಲ್ಲಿ ಚಿತ್ತಾಪುರ ಕ್ಷೇತ್ರಕ್ಕೆ ನಡೆದ ಉಪ ಚುನಾವಣೆಯಲ್ಲಿ ಕಾಂಗ್ರೆಸ್‌ನ ಪ್ರಿಯಾಂಕ್ ಖರ್ಗೆ ಅವರನ್ನು ಸೋಲಿಸಿದ್ದರು. ಶನಿವಾರ (ಮಾರ್ಚ್ 20) ಮಧ್ಯಾಹ್ನ 1ಕ್ಕೆ ವಾಡಿಯಲ್ಲಿ ಅಂತ್ಯಸಂಸ್ಕಾರ ನೆರವೇರಲಿದೆ ಎಂದು ಕುಟುಂಬದವರು ತಿಳಿಸಿದ್ದಾರೆ.